**Akashvani : Bangalore**
**Regional Bulletin In Kannada**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**17.09.2026 / 18.40 hrs**

---

ಮುಖ್ಯಾಂಶಗಳು

೧. ಎರಡನೇ ಹಂತದಲ್ಲಿ ೨೩ ತಾಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸಿದ ಸರ್ಕಾರ

೨. ರೇಷನ್ ಕಾರ್ಡ್ ಇ-ಕೆವೈಸಿ ಗಡುವು ಅಕ್ಟೋಬರ್ ೨೦ರ ವರೆಗೆ ವಿಸ್ತರಿಸಿ ಆಹಾರ ಇಲಾಖೆ ಆದೇಶ

೩. ಗಾಣಗಾಪುರದಲ್ಲಿ ಹಂತ ಹಂತವಾಗಿ ಅಭಿವೃದ್ಧಿ ಕಾರ್ಯ ಕೈಗೊಳ್ಳಲು ನಿರ್ಧಾರ - ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

೪. ರಾಜ್ಯದ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಶಾರ್ಜಾದಲ್ಲಿ ಸ್ಕೈಂಗ್ ಟ್ರಾನ್ಸ್‌ಪೋರ್ಟ್ ವ್ಯವಸ್ಥೆ ಪರಿಶೀಲಿಸಿದ ಸಚಿವ ಕೆ.ಜೆ. ಜಾರ್ಜ್ ನೇತೃತ್ವದ ನಿಯೋಗ

೫. ಬಿಜೆಪಿ ಸೇವಾ ಸಂಕಲ್ಪ ಅಭಿಯಾನ - ಹುಬ್ಬಳ್ಳಿಯಲ್ಲಿ ಹೊಲಿಗೆ ಯಂತ್ರ ವಿತರಿಸಿದ ಸಚಿವ ಪ್ರಲ್ಹಾದ್ ಜೋಶಿ; ಸ್ವಚ್ಛತಾ ಕಾರ್ಯದಲ್ಲಿ ಭಾಗಿಯಾದ ಸಚಿವ ವಿ. ಸೋಮಣ್ಣ

೬. ಮಂಗಳೂರಿನಲ್ಲಿ ನಾಳೆ ಸಚಿವ ಸಂಪುಟ ಸಭೆ; ನಗರದಲ್ಲಿ ಬಿಗಿ ಭದ್ರತೆ

---

ರಾಜ್ಯದಲ್ಲಿ ಮುಂಗಾರು ಋತುವಿನಲ್ಲಿ ಒಣಹವೆ ಮುಂದುವರಿದಿದ್ದು, ಮಳೆಯ ಅಭಾವದಿಂದಾಗಿ ಸಂಕಷ್ಟಕ್ಕೆ ಸಿಲುಕಿರುವ ಹೆಚ್ಚುವರಿ ೨೩ ತಾಲೂಕುಗಳನ್ನು ಬರಪೀಡಿತ ತಾಲೂಕುಗಳು ಎಂದು ಸರ್ಕಾರ ಘೋಷಿಸಿದೆ.

ಮೊದಲ ಹಂತದ ಅಧಿಸೂಚನೆಯಲ್ಲಿ ೧೦೧ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿತ್ತು. ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅಧ್ಯಕ್ಷತೆಯಲ್ಲಿ ನಡೆದ ನೈಸರ್ಗಿಕ ವಿಕೋಪಗಳ ಸಂಪುಟ ಉಪ ಸಮಿತಿ ಸಭೆಯಲ್ಲಿ ನೀಡಿದ ನಿರ್ದೇಶನದಂತೆ ೨೪ ತಾಲೂಕುಗಳ ೨೧೪ ಹಳ್ಳಿಗಳಲ್ಲಿ ಮೊಬೈಲ್ ಆಪ್ ಮೂಲಕ ಸ್ಥಳ ಪರಿಶೀಲನೆ ನಡೆಸಲಾಗಿತ್ತು. ಇವುಗಳಲ್ಲಿ ೨೧ ತಾಲೂಕುಗಳು ತೀವ್ರ ಬರಪೀಡಿತ ಹಾಗೂ ೨ ತಾಲೂಕುಗಳು ಸಾಧಾರಣ ಬರಪೀಡಿತ ಎಂದು ವರ್ಗೀಕರಿಸಲ್ಪಟ್ಟಿದೆ.

ತಿಪಟೂರು, ಕಾರಟಗಿ, ಮಾನ್ವಿ, ಸಿಂಧನೂರು ಮತ್ತು ಸಿರಿವಾರ, ಅಫಜಲಪುರ, ಆಳಂದ, ಚಿತ್ತಾಪುರ, ಕಲಬುರಗಿ, ಯಡ್ರಾಮಿ ಮತ್ತು ಶಹಾಬಾದ್, ಭಾಲ್ಕಿ, ಬಸವನಬಾಗೇವಾಡಿ, ಬಬಲೇಶ್ವರ ಮತ್ತು ತಿಕೋಟಾ, ರಟ್ಟೀಹಳ್ಳಿ, ಹುಬ್ಬಳ್ಳಿ, ನವಲಗುಂದ, ಹುಬ್ಬಳ್ಳಿ ನಗರ ಮತ್ತು ಅಣ್ಣಿಗೇರಿ, ಕಡೂರು ತೀವ್ರ ಬರಪೀಡಿತ ತಾಲೂಕುಗಳಾದರೆ ಕೊಡಗು ಜಿಲ್ಲೆಯ ಪೊನ್ನಂಪೇಟೆ ಮತ್ತು ವೀರಾಜಪೇಟೆಯನ್ನು ಸಾಧಾರಣ ಬರಪೀಡಿತ ಎಂದು ಘೋಷಿಸಲಾಗಿದೆ.

---

ನ್ಯಾಯಬೆಲೆ ಅಂಗಡಿಗಳಲ್ಲಿ ಎದುರಾಗುತ್ತಿರುವ ಸರ್ವರ್ ಸಮಸ್ಯೆಯಿಂದಾಗಿ ಇ-ಕೆವೈಸಿಗೆ ಅಡಚಣೆ ಉಂಟಾದ ಹಿನ್ನೆಲೆ ಪಡಿತರ ಇ-ಕೆವೈಸಿ ಅವಧಿ ವಿಸ್ತರಣೆ ಮಾಡಿ ಸರ್ಕಾರ ಅದೇಶ ಹೊರಡಿಸಿದೆ. ಇದೇ ೩೦ರವರೆಗೆ ಇದ್ದ ಕೊನೆ ದಿನಾಂಕವನ್ನು ಅಕ್ಟೋಬರ್ ೧೦ರವರೆಗೆ ಅವಧಿ ವಿಸ್ತರಿಸಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಆದೇಶ ಹೊರಡಿಸಿದೆ.

ನ್ಯಾಯಬೆಲೆ ಅಂಗಡಿಗಳ ಸಮಯವನ್ನು ಪರಿಷ್ಕರಣೆ ಮಾಡಲಾಗಿದ್ದು, ಅಕ್ಟೋಬರ್ ೧ ರಿಂದ ನೂತನ ಸಮಯ ಜಾರಿಗೆ ಬರಲಿದೆ ಎಂದು ಆಹಾರ ಸಚಿವ ರಿಜ್ವಾನ್ ಅರ್ಷದ್ ಮಾಹಿತಿ ನೀಡಿದ್ದಾರೆ.

ನ್ಯಾಯಬೆಲೆ ಅಂಗಡಿಗಳ ಸಮಯ ಬೆಳಗ್ಗೆ ೭ ಗಂಟೆಯಿಂದ ಮಧ್ಯಾಹ್ನ ೧೨ ಗಂಟೆಯವರೆಗೆ ಮತ್ತು ಸಂಜೆ ೪ ಗಂಟೆಯಿಂದ ರಾತ್ರಿ ೮ ಗಂಟೆಯವರೆಗೆ ಪಡಿತರ ನೀಡಲು ಸಮಯ ನಿಗದಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

---

ರಾಜ್ಯದಲ್ಲಿ ಬರಗಾಲ ಪರಿಸ್ಥಿತಿ ಎದುರಾಗಿದ್ದು ಈ ಕುರಿತು ಚರ್ಚಿಸಲು ಈ ತಿಂಗಳ ೨೧ರಿಂದ ೩ ದಿನಗಳ ಕಾಲ ವಿಶೇಷ ಅಧಿವೇಶನ ಕರೆಯಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಗಾಣಗಾಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಬಿಜೆಪಿ ನಾಯಕರು ಅಧಿವೇಶನದಲ್ಲಿ ಚರ್ಚೆ ಮಾಡದೆ, ಕೇವಲ ರಾಜಕೀಯ ಮಾಡಿದ್ದರು ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಗಾಣಗಾಪುರ ದಕ್ಷಿಣ ಭಾರತದ ಅತ್ಯಂತ ಪವಿತ್ರ ಹಾಗೂ ಶ್ರೇಷ್ಠ ಪುಣ್ಯಕ್ಷೇತ್ರವಾಗಿದೆ. ಗಾಣಗಾಪುರ ಕ್ಷೇತ್ರದ ಸಮಗ್ರ ಅಭಿವೃದ್ಧಿ ಹಾಗೂ ಭಕ್ತರಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಈಗಾಗಲೇ ಸೂಕ್ತ ಯೋಜನೆಗಳನ್ನು ಘೋಷಿಸಿದೆ. ಸ್ಥಳೀಯ ಶಾಸಕರು ಹಾಗೂ ಜಿಲ್ಲಾ

ಉಸ್ತುವಾರಿ ಸಚಿವರ ಮನವಿಯಂತೆ ಹಂತ- ಹಂತವಾಗಿ ಕ್ಷೇತ್ರದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು" ಎಂದು ಭರವಸೆ ನೀಡಿದ್ದಾರೆ.

---

ರಾಜ್ಯದ ಪ್ರಮುಖ ಪ್ರವಾಸಿ ತಾಣಗಳಲ್ಲಿ ಸಂಪರ್ಕ ವ್ಯವಸ್ಥೆಯನ್ನು ಸುಧಾರಿಸುವುದು ಹಾಗೂ ಆಧುನಿಕ ಸಾರಿಗೆ ತಂತ್ರಜ್ಞಾನಗಳ ಬಳಕೆಯ ಸಾಧ್ಯತೆಯನ್ನು ಪರಿಶೀಲಿಸುವ ಉದ್ದೇಶದಿಂದ ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ನೇತೃತ್ವದ ನಿಯೋಗ ಶಾರ್ಜಾದಲ್ಲಿ ಸ್ಟ್ರಿಂಗ್ ಟ್ರಾನ್ಸ್‌ಪೋರ್ಟ್ ವ್ಯವಸ್ಥೆಯನ್ನು ಪರಿಶೀಲಿಸಿತು.

ಹಂಪಿಯಂತಹ ವಿಶಾಲ ಪ್ರವಾಸಿ ವಲಯಗಳು, ಘಟ್ಟ ಪ್ರದೇಶಗಳು, ನಗರಗಳಿಗೆ ಹೊಂದಿಕೊಂಡಿರುವ ಪ್ರವಾಸಿ ತಾಣಗಳು ಹಾಗೂ ಭೂಸ್ವಾಧೀನಕ್ಕೆ ಅವಕಾಶ ಕಡಿಮೆ ಇರುವ ಪ್ರದೇಶಗಳಲ್ಲಿ ಇಂತಹ ಎಲಿವೇಟೆಡ್ ಸಾರಿಗೆ ವ್ಯವಸ್ಥೆಗಳ ಉಪಯುಕ್ತತೆ ಕುರಿತು ಪರಿಶೀಲನೆ ನಡೆಸಲು ನಿಯೋಗ ನಿರ್ಧರಿಸಿದೆ.

ಇದೇ ವೇಳೆ ಮಾತನಾಡಿದ ಸಚಿವ ಕೆ.ಜೆ. ಜಾರ್ಜ್, ಜಗತ್ತಿನ ವಿವಿಧ ಭಾಗಗಳಲ್ಲಿ ಬಳಕೆಯಾಗುತ್ತಿರುವ ನೂತನ ಸಾರಿಗೆ ತಂತ್ರಗಳನ್ನು ಅಧ್ಯಯನ ಮಾಡಿ, ರಾಜ್ಯದ ಅಗತ್ಯಗಳಿಗೆ ಯಾವ ಮಾದರಿ ಸೂಕ್ತ ಎಂಬುದನ್ನು ಪರಿಶೀಲಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದು ತಿಳಿಸಿದ್ದಾರೆ.

---

ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಮಂಗಳೂರಿನಲ್ಲಿಂದು ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ನಡೆಯುತ್ತಿರುವ ನಗರಾಭಿವೃದ್ಧಿ ಕಾಮಗಾರಿಗಳ ಪ್ರಗತಿ, ಕುಡಿಯುವ ನೀರು, ಒಳಚರಂಡಿ ಸೇರಿದಂತೆ ಹಲವು ವಿಷಯಗಳ ಕುರಿತು ಪರಿಶೀಲನೆ ನಡೆಸಿದರು.

ಈ ವೇಳೆ ನಗರಾಭಿವೃದ್ಧಿ ಕಾರ್ಯಕ್ರಮಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ರಾಜ್ಯದ ೧೩ ಮಹಾನಗರ ಪಾಲಿಕೆಗಳನ್ನು ಡಿಜಿಟಲೀಕರಣಗೊಳಿಸುವ ಪ್ರಕ್ರಿಯೆ ನಡೆಯುತ್ತಿದ್ದು, ಪಾಲಿಕೆಯ ಎಲ್ಲಾ ಸೇವೆಗಳು ಹಾಗೂ ಅಗತ್ಯ ಮಾಹಿತಿಗಳು ಸಾರ್ವಜನಿಕರಿಗೆ ಡಿಜಿಟಲ್ ರೂಪದಲ್ಲಿ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ.

ಬಳಿಕ ಅವರು ಪಚ್ಚನಾಡಿಯಲ್ಲಿರುವ ಘನತ್ಯಾಜ್ಯ ವಿಲೇವಾರಿ ಘಟಕಕ್ಕೆ ಭೇಟಿ ನೀಡಿ ವೈಜ್ಞಾನಿಕ ತ್ಯಾಜ್ಯ ವಿಲೇವಾರಿ ಹಾಗೂ ನಿರ್ವಹಣಾ ಕಾಮಗಾರಿಗಳನ್ನು ಪರಿಶೀಲಿಸಿದರು. ಮೂಲದಲ್ಲೇ ಶೇಕಡ ನೂರರಷ್ಟು ಕಸ ವಿಂಗಡನೆ ಕಡ್ಡಾಯ ಎಂದು ತಿಳಿಸಿದ್ದಾರೆ.

---

ಮನುಷ್ಯನಿಗೆ ನೈರ್ಮಲ್ಯ ಎಷ್ಟು ಮುಖ್ಯವೋ, ಆರೋಗ್ಯವೂ ಅಷ್ಟೇ ಮುಖ್ಯ. ಸ್ವಚ್ಛತೆ ನಮ್ಮೆಲ್ಲರ ಆದ್ಯತೆಯಾಗಬೇಕು ಎಂದು ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ.

ತುಮಕೂರು ರೈಲ್ವೆ ನಿಲ್ದಾಣದಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ೭೫ನೇ ಹುಟ್ಟುಹಬ್ಬದ ಅಂಗವಾಗಿ ಹಮ್ಮಿಕೊಂಡಿದ್ದ ಸ್ವಚ್ಛತಾ ಅಭಿಯಾನ ಕಾರ್ಯಕ್ರಮದಲ್ಲಿ ಭಾಗಿಯಾಗಿ, ಮಾತನಾಡಿದ ಅವರು, ಪ್ರಧಾನಿ ಹುಟ್ಟುಹಬ್ಬದ ಪ್ರಯುಕ್ತ ಇಂದು ಸ್ವಚ್ಛತಾ ದಿನವನ್ನು ಆಚರಣೆ ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ.

ಇದೇ ವೇಳೆ ರೈಲ್ವೆ ನಿಲ್ದಾಣದಲ್ಲಿ ಪೌರ ಕಾರ್ಮಿಕರೊಂದಿಗೆ ಸ್ವಚ್ಛತಾ ಕಾರ್ಯದಲ್ಲಿ ಸಚಿವ ವಿ. ಸೋಮಣ್ಣ ಭಾಗಿಯಾದರು. ಶಾಲಾ ಮಕ್ಕಳಿಗೆ ನೋಟ್‌ಬುಕ್ ವಿತರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಉತ್ತಮವಾಗಿ ವ್ಯಾಸಂಗ ಮಾಡುವಂತೆ ಕರೆ ನೀಡಿದರು.

---

ದೇಶದಲ್ಲಿ ಭದ್ರತೆ ಮತ್ತು ಅಭಿವೃದ್ಧಿಗೆ ಹೊಸ ಆಯಾಮ ನೀಡಲಾಗಿದ್ದು, ಉಚಿತ ಧಾನ್ಯ ವಿತರಣೆ, ಎಂ.ಎಸ್.ಪಿ ದರ ಏರಿಕೆ ಹಾಗೂ ಗೊಬ್ಬರದ ಬೆಲೆ ಹೆಚ್ಚಾಗದಂತೆ ಸಬ್ಸಿಡಿ ನೀಡುವ ಮೂಲಕ ರೈತರು ಮತ್ತು ಸಾರ್ವಜನಿಕರ ಹಿತ ಕಾಯಲಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಪ್ರಧಾನಿ ಅವರ ಜನ್ಮದಿನದ ಅಂಗವಾಗಿ, ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಧಾರವಾಡ ಜಿಲ್ಲೆಯ ಅಭಿವೃದ್ಧಿಗೆ ಸಂಬಂಧಿಸಿದಂತೆ, 'ಹರ್ ಘರ್ ನಲ್ ಸೇ ಜಲ್' ಯೋಜನೆಯಡಿ ಪ್ರತಿಯೊಂದು ಮನೆಗೆ ಕುಡಿಯುವ ನೀರು ಒದಗಿಸಲಾಗಿದ್ದು, ಡಿಸೆಂಬರ್ ವೇಳೆಗೆ ಮಲಪ್ರಭಾ ನದಿಯ ನೀರನ್ನು ಪೂರೈಸಲು ೧ಸಾವಿರದ ೧೦೦ ಕೋಟಿ ರೂಪಾಯಿಗೂ ಹೆಚ್ಚು ಅನುದಾನ ಕಾಯ್ದಿರಿಸಲಾಗಿದೆ ಎಂದು ತಿಳಿಸಿದ್ದಾರೆ.

ಧ್ವನಿ - ಪ್ರಲ್ಹಾದ್ ಜೋಶಿ

ಇದೇ ವೇಳೆ, ಮಹಿಳೆಯರನ್ನು ಸ್ವಾವಲಂಬಿಗಳನ್ನಾಗಿ ಮಾಡುವ 'ಲಖ್‌ಪತಿ ದಿದಿ' ಯೋಜನೆಯಡಿ ಸುಮಾರು ೧೨,೦೦೦ಕ್ಕೂ ಹೆಚ್ಚು ಮಹಿಳೆಯರಿಗೆ ತರಬೇತಿ ನೀಡಲಾಗಿದ್ದು, ಇಂದು ೩೦೦ ಅರ್ಹ ಫಲಾನುಭವಿಗಳಿಗೆ ಹೊಲಿಗೆ ಯಂತ್ರಗಳನ್ನು ವಿತರಿಸಿದರು.

---

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ದೇಶಾದ್ಯಂತ ಸೇವಾ ಸಂಕಲ್ಪ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ಇದರ ಭಾಗವಾಗಿ ಭಾಗವಾಗಿ ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದು ಬಾಹ್ಯಾಕಾಶ ವಲಯದಲ್ಲಿ ಕೈಗೊಂಡ ಸುಧಾರಣೆಗಳ ಒಂದು ನೋಟ ಇಲ್ಲಿದೆ.

೨೦೨೦ರಲ್ಲಿ ಕೇಂದ್ರ ಸರ್ಕಾರ ಕೈಗೊಂಡ ಮಹತ್ವದ ಸುಧಾರಣೆಗಳ ಪರಿಣಾಮ ಬಾಹ್ಯಾಕಾಶ ವಲಯದಲ್ಲಿ ಖಾಸಗಿಯವರಿಗೂ ಮುಕ್ತ ಅವಕಾಶ ನೀಡಲಾಯಿತು. ಇನ್ ಸ್ಪೇಸ್ ಎಂಬ ಸ್ವತಂತ್ರ ಸಂಸ್ಥೆಯನ್ನು ಹುಟ್ಟಿಹಾಕಲಾಯಿತು. ಇದು ಖಾಸಗಿ ಕಂಪನಿಗಳಿಗೆ ಅನುವು ಮಾಡಿಕೊಡುವ ಏಕಗವಾಕ್ಷಿ ನಿಯಂತ್ರಕ ಹಾಗೂ ಪ್ರವೇಶದ ಅಡೆತಡೆಗಳನ್ನು ಗಣನೀಯವಾಗಿ ಕಡಿಮೆ ಮಾಡಲಿದೆ.

ಇದರ ಪರಿಣಾಮ ೨೦೨೫ರ ವೇಳೆಗೆ ಸುಮಾರು ೪೪೦ ನವೋದ್ಯಮಗಳು ನೋಂದಣಿಯಾಗಿದ್ದು, ಬಂಡವಾಳ ಹೂಡಿಕೆ ೬೧೮ ಮಿಲಿಯನ್ ದಾಟಿದೆ.

---

ಮಂಗಳೂರಿನಲ್ಲಿ ನಾಳೆ ಸಚಿವ ಸಂಪುಟ ಸಭೆ ನಡೆಯಲಿದೆ. ಪಡೀಲ್‌ನಲ್ಲಿರುವ ಜಿಲ್ಲಾಧಿಕಾರಿ ಕಚೇರಿ, ಪ್ರಜಾಸೌಧದಲ್ಲಿ ಸಂಪುಟ ಸಭೆ ನಡೆಯಲಿರುವ ಹಿನ್ನೆಲೆಯಲ್ಲಿ ಸಂಚಾರ ವ್ಯವಸ್ಥೆಯಲ್ಲಿ ತಾತ್ಕಾಲಿಕವಾಗಿ ಬದಲಾವಣೆ ಮಾಡಲಾಗಿದೆ.

ಇಂದು ಸಂಜೆ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ಹಾಗೂ ಸಚಿವರು ನಗರಕ್ಕೆ ಆಗಮಿಸಲಿದ್ದಾರೆ.

ಗಣ್ಯರ ಭದ್ರತೆ ಹಾಗೂ ಸುಗಮ ವಾಹನ ಸಂಚಾರ ದೃಷ್ಟಿಯಿಂದ ಸಾರ್ವಜನಿಕರು ಪೊಲೀಸ್ ಇಲಾಖೆಯ ಸೂಚನೆಗಳನ್ನು ಪಾಲಿಸಿ, ಪರ್ಯಾಯ ಮಾರ್ಗಗಳನ್ನು ಬಳಸುವಂತೆ ಪೊಲೀಸ್ ಇಲಾಖೆ ಮನವಿ ಮಾಡಿದೆ.

ಸಭೆಯಲ್ಲಿ ಪ್ರಮುಖವಾಗಿ ಕರಾವಳಿಯ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು ಎಂದು ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಯು.ಟಿ. ಖಾದರ್ ತಿಳಿಸಿದ್ದಾರೆ.

---

ಸಂಕ್ಷಿಪ್ತ ಸುದ್ದಿ

೧.	ಚಿಕ್ಕಮಗಳೂರಿನಲ್ಲಿ ನಾಳೆ ಮತ್ತು ನಾಡಿದ್ದು ಎರಡು ದಿನಗಳ ಕಾಲ ಕಾಫಿ ಬೆಳೆಗಾರರ ತಾಂತ್ರಿಕ ಸಮಾವೇಶ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕಾಫಿ ಬೆಳೆಗಾರರ ಸಂಘದ ಅಧ್ಯಕ್ಷ ರತೀಶ್ ತಿಳಿಸಿದ್ದಾರೆ.

೨.	ಭಾರತ್ ಜೋಡೋ ಯುವಕ ಸಂಘಗಳ ಸದಸ್ಯರ ನೋಂದಣಿ ಪ್ರಕ್ರಿಯೆಯನ್ನು ನಿಗದಿತ ಗುರಿಯಂತೆ ಪೂರ್ಣಗೊಳಿಸುವುದರ ಜೊತೆಗೆ, ಪ್ರತಿಯೊಬ್ಬ ಸದಸ್ಯರ ಮಾಹಿತಿಯನ್ನು ನಿಖರವಾಗಿ ದಾಖಲಾಗುವಂತೆ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದರು.

೩.	ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ದಿನೇಶ್ ಗೂಳೀಗೌಡ ಅಧ್ಯಕ್ಷತೆಯಲ್ಲಿ ನಾಳೆ ಚಿಕ್ಕಬಳ್ಳಾಪುರದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಂಬಂಧ ಪ್ರಗತಿ ಪರಿಶೀಲನಾ ಸಭೆ ನಡೆಯಲಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಡಾ.ವೈ.ನವೀನ್‌ಭಟ್ ತಿಳಿಸಿದ್ದಾರೆ.

೪.	ಚಾಮರಾಜನಗರ ತಾಲೂಕಿನ ಕಾರೇಪಾಳ್ಯ ಅರಣ್ಯದಲ್ಲಿ ಮರ ಬಿದ್ದ ಪರಿಣಾಮ ಕಾಡಾನೆ ಮರಿಯೊಂದು ಸಾವನ್ನಪ್ಪಿದೆ. ಮೃತ ಗಂಡು ಮರಿಯಾನೆ ಎರಡು ವರ್ಷ ವಯೋಮಾನದ್ದು ಎಂದು ಅಂದಾಜಿಸಲಾಗಿದೆ.

೫.	ಬೆಂಗಳೂರು ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರಾಯೋಗಿಕವಾಗಿ ಸಂಚಾರ ದಟ್ಟಣೆ ಹೆಚ್ಚಿರುವ ಜಯನಗರದಲ್ಲಿ ಕೃತಕ ಬುದ್ಧಿಮತ್ತೆ ಆಧಾರಿತ ಅತ್ಯಾಧುನಿಕ ಸ್ಮಾರ್ಟ್ ಪಾರ್ಕಿಂಗ್ ವ್ಯವಸ್ಥೆ ರೂಪಿಸಲು ಖಾಸಗಿ ಸಂಸ್ಥೆಯೊಂದಿಗೆ ಒಡಂಬಡಿಕೆ ಮಾಡಿಕೊಂಡಿದೆ.

೬.	ಮಳೆ ಇಲ್ಲದೇ ಕಂಗೆಟ್ಟಿದ್ದ ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ವಿವಿಧೆಡೆ ತಡರಾತ್ರಿಯಿಂದ ಮುಂಜಾನೆವರೆಗೂ ಭಾರಿ ಮಳೆಯಾಗಿದ್ದು ಕೆರೆ-ಕಟ್ಟೆಗಳು ಭರ್ತಿಯಾಗಿ ರೈತರಲ್ಲಿ ಆಶಾಭಾವ ಮೂಡಿಸಿದೆ.

__________ ಮುಕ್ತಾಯ ___________